7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸ್ಯೈನ್ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ವುಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕಿದಾರರ ಹೆಸರು.	ಸ್ವತ್ತಿನ ತಪ್ಸೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಕಟ್ಟಡಗಳು. ಅಂದಾಜಾ ಕಿಮ್ಮತ್ತು	ಜಮೀನು. ನಂಬರ್ ಅಥವಾ ಜಮೀನಿನ ಹೆಸರು.	ಜಮೀನು. ಮುಸ್ತೀ ತರೀ ಅಥವಾ ಬಾಗಾಯತು.	ಜಮೀನು. ವಿಸ್ತೀರ್ಣ.	ಜಮೀನು. ಅಕಾರ.	ಸರಕಾರ್ಕ್ಕೆ ಬರಬೇಕಾದ ನಗ್ದಿ ಸಂತತಾದ ಬಾಕಿ ಮೊಲಲಗು.
1	2	3	4	5	6	7	8	9	10	11
					ರೂ. ಆ. ಪೈ.			ಎ. ಗು.	ರೂ. ಆ. ಪೈ.	ರೂ. ಆ. ಪೈ.
ಚಿಕ್ಕ ಜಗಳೂರು.	ಜಾಗರ.	ನೀಲಿನ ಹುಲುಜಿ	ಡಾಕ್ಟರ್ ಸಿಡ್ನಿ ಸ್ಮಿತ್ ಸಾಹೆಬರು ಬಿ. ಎ. ಬ್ರಿಟೋ ಜಂಟಿ.	..	..	17	ಕಾಫೀ	79 12	119 0 0	288 1 1 ಮತ್ತು ಬಡ್ಡಿ ಮನೆ ರೆಡ್ಡಿ ಇತರ

ಬಿ. ಜೆ. ಕೊಮಾರ್‌ಸಾಮಿ ನಾಯಕ,
ಫಾರ್ ಡೆಪ್ಯೂಟಿ ಕಮ್ಮಿಷನರ.

ಫಾರೆಸ್ಟ್ ಡಿಪಾರ್ಟ್‌ಮೆಂಟ್.

ಕಡೂರು ಡಿಸ್ಟ್ರಿಕ್ಟ್.

ನೋಟಿಫಿಕೇಷನ್.

ತಾರೀಖು 28ನೇ ಮಾರ್ಚ್ 1896.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ, ಇದರಡಿ ನಮೂದಿಸುವ ಚೌಬೀನೆ ಕಡೂರು ಡಿಸ್ಟ್ರಿಕ್ಟು ತರೀಕೆರೆ ಡಿವೋದಲ್ಲಿ ಕಡೂರು ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರವರಿಂದ 1896ನೇ ಏಪ್ರಿಲ್ 27ನೇ ತಾರೀಖಿನಲ್ಲಿ ಹರಾಜು ನಡಿಸಲ್ಪಡುವದು.

ಡಿಪೋ ಹೆಸರು.	ಹರಾಜು ತಾರೀಖು.	ಸಾಗುವಾನಿ ತುದಿತುಂಡುಗಳು.
ತರೀಕೆರೆ	27—4—1896	2968

ಹರಾಜು ಷರತ್ತು.—ಸ್ರ 1895ನೇ ಇಸವಿ 15ನೇ ಮಾರ್ಚಿ 15–229 ಆರ್. ಯಫ್. 155—92ನೇ ನಂಬರು ಗವರ್ಮೆಂಟ್ ಇಸ್ತಿಹಾರ್‌ನಲ್ಲಿ ಪ್ರಾಯಿಷ್ ಆಗಿರತಕ್ಕ ರೂಲ್ಸು ಹರಾಜು ವೇಳೆ ವೋದಲ್ಪಡುವದು.

ಬಿ. ಹಿರಾಶಿಂಗ್,
ಡಿಸ್ಟ್ರಿಕ್ಟು ಫಾರೆಸ್ಟ್ ಆಫಿಸರ್.